**ಕರ್ನಾಟಕ ಸರ್ಕಾರ**

**ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ**

ಆಯುಕ್ತರ ಕಛೇರಿ, ನಂ.16-ಡಿ, 3ನೇ ಮಹಡಿ, ಡಿ.ದೇವರಾಜ ಅರಸು ಭವನ,
ಮಿಲ್ಲರ್ಸ್ ಟ್ಯಾಂಕ್ ಬೆಡ್ ಏರಿಯಾ, ವಸಂತ ನಗರ, ಬೆಂಗಳೂರು-560 052.

**ಪ್ರಕಟಣೆ**

ಸಂಖ್ಯೆ: ಹಿಂವಕಇ/ತರಬೇತಿ-1/ಪಿಹೆಚ್.ಡಿ/ ಸಿಆರ್-1/2022-23 ದಿನಾಂಕ:14.01.2023.

**2022-23 ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ಅರ್ಹ ಹೊಸ ವಿದ್ಯಾರ್ಥಿಗಳಿಗೆ ಇಲಾಖೆಯಿಂದ ನೀಡುವ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸುವ ದಿನಾಂಕವನ್ನು ವಿಸ್ತರಿಸುವ ಕುರಿತು.**

2022-23ನೇ ಸಾಲಿನಲ್ಲಿ ಪ್ರಥಮ ವರ್ಷದ ಪೂರ್ಣಾವಧಿ ಪಿಎಚ್.ಡಿ ಅಧ್ಯಯನದಲ್ಲಿ ತೊಡಗಿರುವ ಕರ್ನಾಟಕ ರಾಜ್ಯದ ಹಿಂದುಳಿದ ವರ್ಗಗಳ ಪ್ರವರ್ಗ-I, II (ಎ), III(ಎ) ಹಾಗೂ III(ಬಿ) ಗೆ ಸೇರಿದ ಅರ್ಹ ವಿದ್ಯಾರ್ಥಿಗಳಿಂದ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್ ಗಾಗಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ. 2022-23ನೇ ಸಾಲಿನಲ್ಲಿ ಕರ್ನಾಟಕದ ಶಾಸನಬದ್ಧ ವಿಶ್ವ ವಿದ್ಯಾಲಯಗಳಲ್ಲಿ/ಅಧೀನಕ್ಕೆ ಒಳಪಡುವ ಸಂಸ್ಥೆಗಳಲ್ಲಿ ಪ್ರಥಮ ವರ್ಷದ ಪಿಎಚ್.ಡಿ ಅಧ್ಯಯನ ಮಾಡುತ್ತಿರುವ ಹೊಸ ವಿದ್ಯಾರ್ಥಿಗಳು ಮಾತ್ರ ಆನ್-ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವನ್ನು 30.01.2023 ಸಂಜೆ 5.00 ಗಂಟೆಯವರೆಗೆ ವಿಸ್ತರಿಸಿದೆ. ಹೆಚ್ಚಿನ ವಿವರಗಳು ಇಲಾಖಾ ವೆಬ್ ಸೈಟ್ https://bcwd.karnataka.gov.in ನಲ್ಲಿ ಲಭ್ಯವಿದ್ದು, ವಿದ್ಯಾರ್ಥಿಗಳು ಎಲ್ಲಾ ಮಾಹಿತಿಯನ್ನು ಓದಿ, ತಿಳಿದುಕೊಂಡು ನಂತರ ಆನ್-ಲೈನ್ ಅರ್ಜಿ ಸಲ್ಲಿಸುವುದು.

ಸಹಾಯವಾಣಿ ಸಂಖ್ಯೆ: 8050770004 (ಕಛೇರಿ ಕಾರ್ಯನಿರ್ವಹಿಸುವ ಸಮಯ ಬೆಳಗ್ಗೆ 10.00 ರಿಂದ ಸಂಜೆ 05.30 ರವರೆಗೆ, ಸಾರ್ವಜನಿಕ ರಜಾ ದಿನಗಳನ್ನು ಹೊರತು ಪಡಿಸಿ)

ಆಯುಕ್ತರು,
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ,
ಬೆಂಗಳೂರು.

D:\2022-23\T-1\PhD\CR-01_online appln.docx